www.theruralmirror.com
ಇ-ಪತ್ರಿಕೆ
19-07-2025




ದ ರೂರಲ್ ಮಿರರ್.ಕಾಂ

# ಭಾರತದಲ್ಲಿ ಅಡಿಕೆ ಕೃಷಿ ಹೇಗಿದೆ..?



ನಮ್ಮಲ್ಲಿ ಅಡಿಕೆಯ ಕೃಷಿಯನ್ನು ಅನಾದಿ ಕಾಲದಿಂದಲೇ ನಮ್ಮ ಪೂರ್ವಜರು ಕೈಗೊಳ್ಳುತ್ತಾ ಬಂದಿದ್ದು, ಇದು ಇಂದು ಒಂದು ವ್ಯವಸ್ಥಿತ ರೀತಿಯ ಕೃಷಿಯಾಗಿ ಮಾರ್ಪಟ್ಟಿದೆ. ಇತ್ತೀಚಿನ ವರ್ಷಗಳಲ್ಲಿ ಇದರ ಕೃಷಿ ವ್ಯಾಪಕವಾಗಿ ವಿಸ್ತರಿಸುತ್ತಿದೆ.ಇದಕ್ಕೆ ಮುಖ್ಯ ಕಾರಣ ಇದರ ಬೆಲೆಯಲ್ಲಿ ಕಂಡು ಬರುತ್ತಿರುವ ಆಕರ್ಷಣೆ.

ನಮ್ಮಲ್ಲಿ ಇಂದು ಕರ್ನಾಟಕ, ಕೇರಳ ಮತ್ತು ಅಸ್ಸಾಂ ರಾಜ್ಯಗಳಲ್ಲಿ ಇದೊಂದು ಪ್ರಮುಖ ಬೆಳೆಯಾಗಿದ್ದು, ಇವುಗಳೊಂದಿಗೆ ಮೇಘಾಲಯ, ತಮಿಳುನಾಡು, ಪಶ್ಚಿಮ ಬಂಗಾಳ, ಮಿಜೋರಾಂ, ಮಹಾರಾಷ್ಟ್ರ, ಆಂಧ್ರಪ್ರದೇಶ, ತ್ರಿಪುರ, ಪಾಂಡಿಚೇರಿ, ಅಂಡಮಾನ್ ಮತ್ತು ನಿಕೋಬಾರ್ ದ್ವೀಪ ಸಮೂಹ, ಗೋವಾ ಮತ್ತು ನಾಗಾಲ್ಯಾಂಡ್ ರಾಜ್ಯಗಳಲ್ಲಿ ಬೆಳೆಸಲಾಗುತ್ತಿದೆ.

ಭಾರತದಲ್ಲಿ ಯಾವುದೇ ಉತ್ಪನ್ನಗಳನ್ನು ನಿಷೇಧ ಮಾಡುವುದು ಅಷ್ಟು ಸುಲಭವಲ್ಲ.ಈ ಮೊದಲು ಗುಟ್ಕವನ್ನು ಒಮ್ಮೆ ನಿಷೇಧ ಮಾಡಿದ್ದಾಗ ಅದು ಹೊಸ ರೂಪದಲ್ಲಿ ಮಾರುಕಟ್ಟೆಗೆ ಬಂತು. ಇಂತಹ ಉತ್ಪನ್ನಗಳ ಮಾರಾಟಗಾರರು ಯಾವತ್ತೂ ಬದಲೀ ಉತ್ಪನ್ನಗಳ ತಯಾರಿಗೆ ಸಾಕಷ್ಟು ಸಂಶೋಧನೆ ಮಾಡಿಯೇ ಇರುತ್ತಾರೆ. ಪ್ರಕೃತಿ,ಹವಾಮಾನ ಇವೆಲ್ಲಾ ಉತ್ಪಾದನೆಯ ಏರುಪೇರು ನಿರ್ಧರಿಸುತ್ತವೆ.ಹೀಗಿದ್ದರೂ ಉತ್ಪಾದನಾ ವೆಚ್ಚ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಮುಂದೆ ಉತ್ಪಾದನೆ ಹೆಚ್ಚಾಗಿ ಧಾರಣೆ ಕುಸಿಯಬಹುದು ಎಂಬ ಪ್ರಶ್ನೆ ಬೆಳೆಗಾರರಲ್ಲಿ ಕಾಡುವುದು ಸಹಜ.ಇದರೊಂದಿಗೆ ಸರಕಾರದ ಆಂತರಿಕ ಮತ್ತು ಬಾಹ್ಯ ನೀತಿಗಳು ಅಡಿಕೆ ಬೆಳೆಯ ದೃಷ್ಟಿಯಿಂದ ಪೂರಕ ಆಗಿರದ ಕಾರಣ, ಜೀವನೋಪಾಯಕ್ಕಾಗಿ ಅನಾದಿಕಾಲದಿಂದ ಇದನ್ನೇ ಅವಲಂಬಿಸಿರುವ ಸಣ್ಣ ಮತ್ತು ಮಧ್ಯಮ ವರ್ಗದ ಕೃಷಿಕರಲ್ಲಿ ಆತಂಕ ಮೂಡುವುದು ಸರ್ವೇ ಸಾಮಾನ್ಯ ಸಂಗತಿ ಆಗಿದೆ.

ಹೆಚ್ಚಿನ ಓದಿಗೆ : www.theruralmirror.com


## ಹೈನುಗಾರಿಕೆ, ಕುರಿ ಮತ್ತು ಮೇಕೆ ಸಾಕಣಿಕೆ ಕುರಿತು ಕಾರ್ಯಕ್ರಮ



2025-26 ನೇ ಸಾಲಿನ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲೂಕಿನಲ್ಲಿ ಜಿಲ್ಲಾ ಕೃಷಿ ಕೇಂದ್ರದಲ್ಲಿ ರೈತರಿಗೆ ವೈಜ್ಞಾನಿಕ ಮಾದರಿಯಲ್ಲಿ ಹೈನುಗಾರಿಕೆ, ಕುರಿ ಮತ್ತು ಮೇಕೆ ಸಾಕಣಿಕೆ ಕುರಿತು ಮೂರು ದಿನಗಳ ಉಚಿತ ತರಬೇತಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಮುಖ್ಯಸ್ಥ ಆರ್. ರಜನೀಕಾಂತ ಮಾತನಾಡಿ, ಕುರಿ, ಮೇಕೆ, ಹಸು ಸಾಕಾಣಿಕೆ ಮಾಡಲು ವೈಜ್ಞಾನಿಕ ಪದ್ಧತಿ ನೆರವಾಗಲಿದೆ. ಸಾಂಸ್ಥಿಕ ಹಾಗೂ ತಾಂತ್ರಿಕ ಮಾಹಿತಿ ಜತೆಗೆ ಹೈನುಗಾರಿಕೆಯಲ್ಲಿ ರೈತರು ಯಶಸ್ವಿಯಾಗಿದ್ದಾರೆ ಎಂದು ಹೇಳಿದರು.

## ಹಿರಿಯ ಯಕ್ಷಗಾನ ಕಲಾವಿದ ಪಾತಾಳ ವೆಂಕಟರಮಣ ಭಟ್ ನಿಧನ



ಹಿರಿಯ ಯಕ್ಷಗಾನ ಕಲಾವಿದ ಪಾತಾಳ ವೆಂಕಟರಮಣ ಭಟ್ (92) ಉಪ್ಪಿನಂಗಡಿಯಲ್ಲಿರುವ ಸ್ವಗೃಹ “ಪಾತಾಳ” ದಲ್ಲಿ ಶನಿವಾರ ಹೃದಯಾಘಾತದಿಂದ ನಿಧನರಾದರು. ಅವರಿಗೆ ಇಬ್ಬರು ಪುತ್ರರು ಹಾಗೂ ನಾಲ್ಕು ಮಂದಿ ಪುತ್ರಿಯರು ಇದ್ದಾರೆ. ಅವರ ಮಗ ಅಂಬಾಪ್ರಸಾದ ಪಾತಾಳ ಪ್ರಸಿದ್ಧ ಸ್ತ್ರೀವೇಷಧಾರಿಯಾಗಿ ಪ್ರಸಿದ್ಧರಾಗಿದ್ದಾರೆ. 1933 ರ ನವಂಬರ್ 16 ರಂದು ಪುತ್ತೂರು ಬಳಿ ಬೈಪದವು ಎಂಬಲ್ಲಿ ರಾಮಭಟ್ಟ ಮತ್ತು ಹೇಮಾವತಿ ದಂಪತಿಯ ಮಗನಾಗಿ ಜನಿಸಿದ ಇವರು 8ನೆ ತರಗತಿವರೆಗೆ ವಿದ್ಯಾಭ್ಯಾಸ ಮಾಡಿದರು. ಬಳಿಕ ಸೌಕೂರು ಮೇಳದ ಸ್ತ್ರೀ ವೇಷಧಾರಿ ಸೀತಾರಾಮ ಅವರಿಂದ ಬಡಗುತಿಟ್ಟಿನ ನಾಟ್ಯದ ಹೆಜ್ಜೆಗಳನ್ನೂ ಪೆರುವೋಡಿ ನಾರಾಯಣ ಭಟ್ಟರಿಂದ ತೆಂಕುತಿಟ್ಟಿನ ನಾಟ್ಯಗಾರಿಕೆ ಕಲಿಕೆಯನ್ನೂ ಪೂರ್ಣಗೊಳಿಸಿದರು. ಕಡಾರು ನಾರಾಯಣ ಭಟ್ ಹಾಗೂ ಅಳಿಕೆ ರಾಮಯ್ಯ ರೈ ಅವರಿಂದಲೂ ಹೆಚ್ಚಿನ ನಾಟ್ಯಾಭ್ಯಾಸ ಕರಗತ ಮಾಡಿಕೊಂಡರು.

ಕಾಂಚನ ಮೇಳ, ಸೌಕೂರು ಮೇಳ, ಮೂಲ್ಕಿ ಮೇಳದಲ್ಲಿ ಕಲಾವಿದರಾಗಿ ಸೇವೆ ಮಾಡಿದ ಬಳಿಕ ಕೀರ್ತಿಶೇಷ ರತ್ನವರ್ಮ ಹೆಗ್ಗಡೆಯವರು ಧರ್ಮಾಧಿಕಾರಿಗಳಾಗಿದ್ದ ಅವಧಿಯಲ್ಲಿ1963 ರಲ್ಲಿ ಧರ್ಮಸ್ಥಳ ಮೇಳಕ್ಕೆ ಸ್ತ್ರೀ ಪಾತ್ರಧಾರಿಯಾಗಿ ಸೇರಿದರು. 18 ವರ್ಷಗಳ ಸೇವೆ ಬಳಿಕ ನಿವೃತ್ತರಾದರು. ನಿವೃತ್ತಿ ಬಳಿಕ ಉಪ್ಪಿನಂಗಡಿಯ ಹಿರೆಂಬಾಡಿ ಬಳಿ “ಪಾತಾಳ” ದಲ್ಲಿ ವಾಸ್ತವ್ಯ ಇದ್ದರು.






# ನಿರಂತರತೆಗೆ ಇರುವ ಶಕ್ತಿ ಅಪಾರ: ರಾಘವೇಶ್ವರ ಶ್ರೀ

ನೀರು ಕಲ್ಲಿಗಿಂತ ಮೆದುವಾದರೂ, ನಿರಂತರತೆಯಿಂದ ಕಲ್ಲನ್ನೂ ಕೊರೆಯಬಲ್ಲದು. ನಿರಂತರತೆಗೆ ಇರುವ ಶಕ್ತಿ ಅಪಾರ. ಅಂತೆಯೇ ಜೀವನದಲ್ಲೂ ಪ್ರತಿದಿನ ಒಂದೊಂದೇ ಸತ್ಕಾರ್ಯಗಳನ್ನು ಎಡೆಬಿಡದೇ ಮಾಡಿದರೆ ಅದ್ಭುತ ಶಕ್ತಿ ಬರುತ್ತದೆ ಎಂದು ಹೊಸನಗರ ಶ್ರೀರಾಮಚಂದ್ರಾಪುರ ಮಠದ ಶ್ರೀರಾಘವೇಶ್ವರಭಾರತೀ ಮಹಾಸ್ವಾಮೀಜಿ ನುಡಿದರು.

ಅಶೋಕೆಯಲ್ಲಿ ಸ್ವಭಾಷಾ ಚಾತುರ್ಮಾಸ್ಯ ವ್ರತ ಕೈಗೊಂಡಿರುವ ಶ್ರೀಗಳು ಶುಕ್ರವಾರ 'ದಿನಚರ್ಯ' ಮಾಲಿಕೆಯಲ್ಲಿ ಪ್ರವಚನ ಅನುಗ್ರಹಿಸಿದರು. ಜೀವನದಲ್ಲಿ ನಿರಂತರತೆಗೆ ಇರುವ ಶಕ್ತಿ ಯಾವುದಕ್ಕೂ ಇಲ್ಲ ಎಂದು ವಿಶ್ಲೇಷಿಸಿದರು. ಒಂದು ಒಳ್ಳೆಯ ಅಭ್ಯಾಸ ನಮ್ಮನ್ನು ಉದ್ಧರಿಸುತ್ತದೆ ಅಂತೆಯೇ ಒಂದು ದುರಭ್ಯಾಸ ನಮ್ಮನ್ನು ನರಕಕ್ಕೆ ಇಳಿಸೀತು; ಆದ್ದರಿಂದ ಕುಂದು ಇಲ್ಲದ ದಿನಚರ್ಯಕೆ ಮನ ಮಾಡಬೇಕು ಎಂದು ಸಲಹೆ ಮಾಡಿದರು.

ಜೀವನದಲ್ಲಿ ಒಂದು ಕೆಡುಕು ಮಾಡಿದರೂ, ಸತ್ಕಾರ್ಯಗಳ ದಿನಚರಿಯಲ್ಲಿ ಒಂದು ದಿನ ಲೋಪವಾದರೂ ಅದು ಕಪ್ಪುಚುಕ್ಕೆಯಾಗಿಯೇ ಉಳಿಯುತ್ತದೆ. ಒಂದು ದಿನವನ್ನು ವ್ಯರ್ಥಮಾಡಿದರೂ ಬಟ್ಟೆಯಲ್ಲಿ ರಂಧ್ರವಾದಂತೆ ಆಗುತ್ತದೆ. ಕೆಲವೊಮ್ಮೆ ಇದು ದೊಡ್ಡ ಅನಾಹುತಕ್ಕೂ ಕಾರಣವಾಗಬಹುದು ಎಂದು ಎಚ್ಚರಿಸಿದರು.

ಜೀವನ ಒಂದು ಹಳ್ಳವಾದರೆ ಅದರಲ್ಲಿ ದಿನ ಒಂದು ಹನಿ ಇದ್ದಂತೆ. ಜೀವನ ಒಂದು ಭವನವಾದರೆ ದಿನ ಇಟ್ಟಿಗೆ ಇದ್ದಂತೆ. ಒಂದು ಇಟ್ಟಿಗೆ ಓರೆಯಾದರೆ ಗೋಡೆ ಡೊಂಕಾಗುತ್ತದೆ. ಜೀವನ ಒಂದು ಪಯಣವಾದರೆ ದಿನ ಒಂದು ಹೆಜ್ಜೆ. ಒಂದು ಹೆಜ್ಜೆ ತಪ್ಪಿದರೂ ಗುರಿ ತಲುಪಲು ಸಾಧ್ಯವಾಗದು ಎಂಬ ಉದಾಹರಣೆ ನೀಡಿದರು.



ಪ್ರತಿದಿನವೂ ಕೆಡುಕು ಮಾಡುವುದಿಲ್ಲ ಎಂಬ ಸಂಕಲ್ಪ ತೊಟ್ಟರೆ ಜೀವನದಲ್ಲಿ ಒಳಿತು ಸಾಧಿಸಬಹುದು ಎಂದರು. ಗಂಗಾಜಲ ಪಾನ ಮಾಡಿದರೆ ಅದರ ಪರಿಣಾಮ ಒಂದು ವರ್ಷ ಇರುತ್ತದೆ ಎಂದು ಶಾಸ್ತ್ರ ಹೇಳುತ್ತದೆ. ಆದ್ದರಿಂದ ಪ್ರತಿದಿನ ಒಂದೊಂದು ಗುಟುಕು ಗಂಗಾಜಲ ಸೇವಿಸಿದರೆ ಶುದ್ಧವಾಗಿರಬಹುದು. ಜೀವನದಲ್ಲೂ ಪ್ರತಿದಿನ ಒಂದು ಒಳ್ಳೆಯ ಕೆಲಸ ಮಾಡಿದರೆ ಜೀವನ ಪಾವನವಾಗುತ್ತದೆ ಎಂದು ವಿಶ್ಲೇಷಿಸಿದರು.

ರಾಮಚಂದ್ರಾಪುರ ಮಂಡಲದ ಹೊಸನಗರ, ಸಂಪೆಕಟ್ಟೆ, ನಿಟ್ಟೂರು, ತುಮರಿ ಮತ್ತು ಹೊಸಕೊಪ್ಪ ವಲಯಗಳ ಶಿಷ್ಯರಿಂದ ಸರ್ವಸೇವೆ ನೆರವೇರಿತು.

ಶ್ರೀಮಠದ ಪ್ರಶಾಸನಾಧಿಕಾರಿ ಸಂತೋಷ್ ಹೆಗಡೆ, ವಿತ್ತಾಧ್ಯಕ್ಷ ಗಣೇಶ್ ಜೆ.ಎಲ್, ವಿದ್ವಾನ್ ಸತ್ಯನಾರಾಯಣ ಶರ್ಮಾ, ಹವ್ಯಕ ಮಹಾಮಂಡಲದ ಪ್ರಧಾನ ಕಾರ್ಯದರ್ಶಿ ಮಹೇಶ್ ಚಟ್ನಳ್ಳಿ, ಉಪಾಧ್ಯಕ್ಷ ಶಾಂತಾರಾಮ ಹೆಗಡೆ ಹಿರೇಮನೆ, ವಿವಿವಿ ಆಡಳಿತಾಧಿಕಾರಿ ಡಾ.ಟಿ.ಜಿ.ಪ್ರಸನ್ನಕುಮಾರ್, ರಾಮಚಂದ್ರಾಪುರ ಮಂಡಲದ ಅಧ್ಯಕ್ಷ ಪ್ರಕಾಶ್ ಜೆ.ಎನ್, ಶ್ರೀಕಾರ್ಯದರ್ಶಿ ಜಿ.ಕೆ.ಮಧು ಮತ್ತಿತರರು ಉಪಸ್ಥಿತರಿದ್ದರು.

ಹೆಚ್ಚಿನ ಓದಿಗೆ : www.theruralmirror.com

## ಚಾಮುಂಡೇಶ್ವರಿ ದರ್ಶನ ಪಡೆದ ಸಚಿವೆ ಶೋಭಾ ಕರಂದ್ಲಾಜೆ

ಆಷಾಢ ಮಾಸದ ಕೊನೆಯ ಶುಕ್ರವಾರದ ಹಿನ್ನೆಲೆಯಲ್ಲಿ ಇಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಅವರು ಮೈಸೂರಿನ ಚಾಮುಂಡೇಶ್ವರಿ ದೇವಿಯ ದರ್ಶನ ಪಡೆದರು. ಬಳಿಕ ಅವರು, ಪ್ರತಿವರ್ಷದಂತೆ ಈ ವರ್ಷವೂ ಆಷಾಢ ಮಾಸದ ಕೊನೆಯ ಶುಕ್ರವಾರದಂದು ದೇವಿಯ ದರ್ಶನ ಪಡೆದಿದ್ದೇನೆ. ಈ ವೇಳೆ ದೇಶಕ್ಕೆ ಒಳಿತಾಗಲಿ ಎಂದು ಪ್ರಾರ್ಥಿಸಿರುವುದಾಗಿ ತಿಳಿಸಿದರು. ಪ್ರಶ್ನೆಯೊಂದಕ್ಕೆ ಉತ್ತರಿಸಿ, ರಾಜ್ಯದಲ್ಲಿ ಭ್ರಷ್ಟಾಚಾರ, ಅವ್ಯವಹಾರ, ಹಗರಣಗಳು ಹೆಚ್ಚಾಗಿವೆ. ಆರ್ಥಿಕವಾಗಿ ಸರ್ಕಾರ ಸಮಸ್ಯೆಗೆ ಸಿಲುಕಿದೆ. ಖಾತರಿ ಯೋಜನೆಗಳು ಸಂಪೂರ್ಣವಾಗಿ ವಿಫಲವಾಗಿದೆ ಎಂದರು.

## ರೈಲ್ವೆ ಕಾಮಗಾರಿ - 43 ಸಾವಿರ ಕೋ. ರೂ. ವೆಚ್ಚದಲ್ಲಿ ಶೀಘ್ರ ಪೂರ್ಣ

ರಾಜ್ಯದಲ್ಲಿ ಕಾಂಗ್ರೆಸ್ ಆಡಳಿತ ಅವಧಿಯಲ್ಲಿ ನೆನೆಗುದ್ದಿಗೆ ಬಿದ್ದಿದ್ದ ಸುಮಾರು 43 ಸಾವಿರ ಕೋಟಿ ರೂಪಾಯಿ ವೆಚ್ಚದ ರೈಲ್ವೆ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದ್ದು, ಅವುಗಳ ಶೀಘ್ರ ಪೂರ್ಣಕ್ಕೆ ಆದ್ಯತೆ ನೀಡಲಾಗುತ್ತಿದೆ ಎಂದು ರೈಲ್ವೆ ಮತ್ತು ಜಲ ಶಕ್ತಿ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ತಿಳಿಸಿದ್ದಾರೆ. ಚಾಮರಾಜನಗರ ಜಿಲ್ಲೆಯ ಕೊಳ್ಳೆಗಾಲದಲ್ಲಿ ನಿನ್ನೆ ಹಮ್ಮಿಕೊಳ್ಳಲಾಗಿದ್ದ ಅಭಿನಂದನಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ರಾಜ್ಯದಲ್ಲಿ ಬಾಕಿ ಇರುವ ರೈಲ್ವೆ ಕಾಮಗಾರಿಗಳನ್ನು ಶೀಘ್ರ ಪೂರ್ಣ ಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಹೆಚ್ಚಿನ ಓದಿಗೆ : www.theruralmirror.com